# <u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಕಪಂರಾಆ/ಅಭಿವೃದ್ಧಿ/78/2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 04.02.2021

## <u>ಸುತ್ತೋಲೆ</u>

**ವಿಷಯ:-** ರಾಜ್ಯ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ **"ಓದುವ ಬೆಳಕು"** ಕಾರ್ಯಕ್ರಮ ಅನುಷ್ಠಾನದ ಕುರಿತು.

*****

ತಮಗೆ ತಿಳಿದಿರುವಂತೆ, ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ದೇಶದ ಭವಿಷ್ಯದ ಪ್ರಜೆಗಳಾದ ಮಕ್ಕಳು ಸಾಮಾಜಿಕವಾಗಿ, ಭಾವನಾತ್ಮಕವಾಗಿ ಹಾಗೂ ಶೈಕ್ಷಣಿಕವಾಗಿ ಸಂಕಷ್ಟಕ್ಕೆ ಸಿಲುಕಿದ್ದು, ಶಾಲೆಗಳು ಮುಚ್ಚಿರುವುದರಿಂದ ಕಲಿಕೆಯಲ್ಲಿ ಉಂಟಾಗಿರುವ ನಷ್ಟದ ಜೊತೆಗೆ, ಶೈಕ್ಷಣಿಕ ಬೆಳವಣಿಗೆಗೂ ಹಿನ್ನಡೆಯಾಗಿದೆ. ಈ ಹಿನ್ನಲೆಯಲ್ಲಿ ಗ್ರಾಮೀಣ ಮಕ್ಕಳ ಕಲಿಕೆಗೆ ನೆರವಾಗುವ ದೃಷ್ಟಿಯಿಂದ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು **ಓದುವ ಬೆಳಕು** ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ.

ಈ ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯದ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ 6-18 ವರ್ಷದ ವಯಸ್ಸಿನ ಮಕ್ಕಳಿಗೆ ಅನುಕೂಲವಾಗುವಂತೆ ಪ್ರತ್ಯೇಕ ಓದುವ ವಿಭಾಗ ಮಾಡಲಾಗಿದ್ದು ಹಾಗೂ ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಡಿಜಿಟಲ್ ಗ್ರಂಥಾಲಯಗಳಾಗಿ ನವೀಕರಿಸಲು ಆದೇಶಿಸಲಾಗಿರುತ್ತದೆ.

ಮುಂದುವರೆದು, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದಲ್ಲಿ ಓದುವ ಬೆಳಕು ಯೋಜನೆಯನ್ನು ಮತ್ತಷ್ಟು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಹಾಗೂ ಗ್ರಾಮಗಳಲ್ಲಿನ 6-18ರ ವಯಸ್ಸಿನ ಮಕ್ಕಳಿಗೆ ಅನುಕೂಲವಾಗಲು ಈ ಕೆಳಕಂಡ ಕ್ರಮಗಳನ್ನು ಅನುಸರಿಸಲು ಆದೇಶಿಸಿದೆ.

- ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಾಲಾ ಶಿಕ್ಷಕರು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮೀಣ ಪ್ರದೇಶದ 6-18 ವರ್ಷದ ವಯಸ್ಸಿನ ಮಕ್ಕಳನ್ನು ಗುರುತಿಸಿ, ಗುರುತಿಸಲಾದ ಮಕ್ಕಳ ಪಟ್ಟಿಯನ್ನು ಗ್ರಾಮವಾರು ವಿಂಗಡಿಸಿ ಮಕ್ಕಳನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಉಚಿತವಾಗಿ ನೊಂದಾಯಿಸುವುದು.
- ಶಾಲೆ ಬಿಟ್ಟ ಮಕ್ಕಳ ಸಮೀಕ್ಷೆಯಲ್ಲಿ ಗುರುತಿಸಲಾದ ಮಕ್ಕಳ ಪೈಕಿ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ನೊಂದಾಯಿತವಲ್ಲದ ಮಕ್ಕಳನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ನೊಂದಾಯಿಸುವುದು.
- ಪ್ರತಿದಿನ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ನೊಂದಾಯಿಸಲಾದ ಮಕ್ಕಳ ಸಂಖ್ಯೆಯನ್ನು ಪಂಚತಂತ್ರ ತಂತ್ರಾಂಶದಲ್ಲಿ ದಾಖಲಿಸುವುದು.

(ಎಸ್.ಆರ್.ಉಮಾಶಂಕರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ
ಬೆಂಗಳೂರು.

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಬೆಂಗಳೂರು.

**<u>ಇವರಿಗೆ,</u>**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ.
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ (ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).

4. ರಾಜ್ಯದ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ (ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)

**<u>ಪ್ರತಿಯನ್ನು ಮಾಹಿತಿಗಾಗಿ:</u>**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ,ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕೆ.ಜಿ.ರಸ್ತೆ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.